# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂ. 176/2015

ಸಿಡಬ್ಲ್ಯೂ-2 ಪಿಡಬ್ಲ್ಯೂ-2

| | |
|---|---|
| ಹೆಸರು | ಸುದರ್ಶನ |
| ತಂದೆ ಹೆಸರು | ಸಿದ್ದಣ್ಣ ಮದಕಲ |
| ವಯಸ್ಸು | 45 ವರ್ಷ |
| ಉದ್ಯೋಗ | ರೇಷನ ಡಿಲರ್ |
| ವಾಸ ಸ್ಥಳ | ಉಡಗಿ |

ದಿನಾಂಕ 17.02.2022

ಪ್ರಮಾಣ ವಚನ ಬೋಧಿಸಲಾಯಿತು.

## ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರವರಿಂದ

ಚಾಸಾ-1 ಮತ್ತು 3 ಇವರ ಪರಿಚಯವಿಲ್ಲ. ಈಗ ತೋರಿಸುತ್ತಿರುವ ದಾಖಲೆಯ ಮೇಲಿರುವ ಸಹಿ ನನ್ನದೆ ಇರುತ್ತದೆ. ಸಾಕ್ಷಿ ಗುರುತಿಸಿದ ದಾಖಲೆಯು ಅಪರಾಧ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ತಹಸೀಲ್ದಾರ ಕಚೇರಿ ಇಲ್ಲಿ ಸಹಿ ಮಾಡಿರುತ್ತೇನೆ. ನಿಪಿ-1 ರಲ್ಲಿ ಏನು ಬರೆಯಲಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಪಂಚನಾಮೆ ಮಾಡಿಲ್ಲ.

**(ಈ ಹಂತದಲ್ಲಿ ಸ.ಸ.ಅ.ರವರ ವಿನಂತಿಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.)**

## ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರವರಿಂದ

ದಿನಾಂಕ 04.07.2014 ರಂದು ಬೆಳಗ್ಗೆ 09.30 ಗಂಟೆಗೆ ಆರೋಪಿ ಶಂಕರ ಇತನ ರೇಷನ ಅಂಗಡಿ ಸಂಖ್ಯೆ-81 ರ ಮುಂದಿನ ರಸ್ತೆಯ ಮೇಲೆ ಪೊಲೀಸರು ಪಂಚನಾಮೆಗೆಂದು ನನ್ನನ್ನು ಕರೆಸಿದ್ದರು ಎಂದರೆ ಸರಿಯಲ್ಲ. ಆಗ ನನ್ನ ಸಮಕ್ಷಮ ನಿಪಿ-1 ರಂತೆ ಪಂಚನಾಮೆಯನ್ನು ಕೈಗೊಂಡು ಸ್ಥಳ ನಕ್ಷೆಯನ್ನು ಪೊಲೀಸರು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಪಂಚನಾಮೆಯಲ್ಲಿ ಪಾಲ್ಗೊಂಡು ಅಪರಾಧ ಸ್ಥಳದಲ್ಲಿಯೇ ನಿಪಿ-1 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-1 ರಂತೆ ಪಂಚನಾಮೆ ಮಾಡಿದ್ದರೂ ಆರೋಪಿ ನನ್ನ ಉದ್ಯೋಗವೇ ಮಾಡುತ್ತಿರುವುದರಿಂದ ಅವನಿಗೆ ಅನುಕೂಲವಾಗುವುದರಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.) ಓ. ಹೇ. ಕೇ.ಸರಿ ಇದೆ.

ಸಹಿ/-

ಪ್ರ.ದ.ನ್ಯಾದಂ.ಸೇಡಂ.

SYH